**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

**ಸಂಖ್ಯೆ: ಪಪೂಶಿಇ/ಶೈ.ಶಾ.04/ದಾ.ವೇಶೈ.ಚ/2018-19** **ದಿನಾಂಕ:19-03-2019**

**ಸುತ್ತೋಲೆ**

**ವಿಷಯ:** ರಾಜ್ಯದ ಪದವಿ ಪೂರ್ವ ತರಗತಿಗಳ 2018-19ನೇ ಶೈಕ್ಷಣಿಕ ಸಾಲಿನ ಕೊನೆಯ ಕರ್ತವ್ಯದ ದಿನ ಹಾಗೂ 2019-20ನೇ ಶೈಕ್ಷಣಿಕ ಸಾಲಿನ ಕಾಲೇಜು ಪ್ರಾರಂಭದ ದಿನಾಂಕವನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:** 2018-19ನೇ ಸಾಲಿನ ದಾಖಲಾತಿ ಮತ್ತು ಶೈಕ್ಷಣಿಕ ಚಟುವಟಿಕೆಗಳ ಮಾರ್ಗಸೂಚಿ.

***

2018-19ನೇ ಶೈಕ್ಷಣಿಕ ಸಾಲಿನ ದಾಖಲಾತಿ ಮತ್ತು ಶೈಕ್ಷಣಿಕ ಚಟುವಟಿಕೆಗಳ ಮಾರ್ಗಸೂಚಿಯ ಅನ್ವಯ, 2018-19ನೇ ಶೈಕ್ಷಣಿಕ ಸಾಲಿನ ಕೊನೆಯ ಕರ್ತವ್ಯದ ದಿನ ದಿನಾಂಕ: 19-03-2019 ಆಗಿರುತ್ತದೆ. ದಿನಾಂಕ: **20-03-2019** ರಿಂದ **19-05-2019** ರವರೆಗೆ ಬೇಸಿಗೆ ರಜೆಯನ್ನು ಘೋಷಿಸಲಾಗಿದೆ.

ಬೇಸಿಗೆ ರಜೆಯ ನಂತರ ಪದವಿ ಪೂರ್ವ ಕಾಲೇಜುಗಳು ದ್ವಿತೀಯ ಪಿಯುಸಿ ತರಗತಿಗಳೊಂದಿಗೆ ದಿನಾಂಕ **20-05-2019** ರಿಂದ ಪ್ರಾರಂಭವಾಗುತ್ತವೆ. ಈಗಾಗಲೇ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಪೂರಕ ಪರೀಕ್ಷೆಯ ವೇಳಾಪಟ್ಟಿಯನ್ನು ಘೋಷಿಸಲಾಗಿದ್ದು, ಈ ವೇಳಾಪಟ್ಟಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲು ಪ್ರಾಂಶುಪಾಲರು ಕ್ರಮ ವಹಿಸುವುದು.

**2019-20ನೇ** ಶೈಕ್ಷಣಿಕ ಸಾಲಿನ ವಾರ್ಷಿಕ ವೇಳಾ ಪಟ್ಟಿಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

**"ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ"**

19/3/2019.

ಜಂಟಿ ನಿರ್ದೇಶಕರು(ಆ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ & ಪ್ರೌಢ ಶಿಕ್ಷಣ (ಪದವಿ ಪೂರ್ವ), ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001. ಇವರ ಮಾಹಿತಿಗಾಗಿ.
2. ಮಾನ್ಯ ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ - ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
5. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಕಚೇರಿ ಪ್ರತಿ.

Scanned with CamScanner